# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಆಯುಕ್ತರವರ ಕಛೇರಿ, ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು, ಬೆಂಗಳೂರು-560 002

ಸಂಖ್ಯೆ: ಬಿ12(ಸಿ1)/ಸಿಜಿ/ಪಿಆರ್/ 31 /2023-24 ದಿನಾಂಕ: 18.1.24
Eoffice No.34489

## ನೇಮಕಾತಿ ಆದೇಶ

ವಿಷಯ: ದಿವಂಗತ ಶ್ರೀ ಕೃಷ್ಣ, ಪೌರಕಾರ್ಮಿಕರು ರವರ ಮಗನಾದ ಶ್ರೀ ಹರೀಶ್ ಕುಮಾರ್.ಕೆ ರವರನ್ನು ಅನುಕಂಪದ ಆಧಾರದ ಮೇಲೆ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ನೇಮಕಾತಿ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರಿ ಆದೇಶದ ಪತ್ರ ಸಂಖ್ಯೆ: ಡಿಪಿಎಆರ್ 100 ಎಸ್‌ಸಿಎ 95, ದಿ: 12-09-1996.
2) ಸದರಿ ಅರ್ಜಿದಾರರ ಮನವಿ ಪತ್ರದ ದಿನಾಂಕ: 02-09-2022
3) ಪೊಲೀಸ್ ಇನ್ಸ್ ಪೆಕ್ಟರ್, ನಗರ ವಿಶೇಷ ಶಾಖೆ, ಆಡಳಿತ, ಪೊಲೀಸ್ ಕಮೀಷನರ್ ರವರ ಪರವಾಗಿ, ಬೆಂಗಳೂರು ನಗರ ರವರ ದೃಢೀಕರಣ ಪತ್ರ ದಿ: 30-12-2022
4) ಸಹಾಯಕ ಕಾರ್ಯನಿರ್ವಹಾಕ ಅಭಿಯಂತರರು (ಘ.ತ್ಯಾ.ನಿ-ಗಾಂಧಿನಗರ) ವಲಯ ರವರ ಸ್ಥಳ ಮಹಜರ್ ವರದಿ
5) ಸಹಾಯಕ ಕಂದಾಯ ಅಧಿಕಾರಿ (ಶಾಂತಿನಗರ) ಉಪ ವಿಭಾಗ ರವರ ಸ್ಥಳ ಮಹಜರ್ ವರದಿ ದಿ:09-1-2023.
5) ವಲಯ ಜಂಟಿ ಆಯುಕ್ತರು (ಪಶ್ಚಿಮ) ವಲಯ ರವರ ಅಧ್ಯಕ್ಷತೆಯಲ್ಲಿ ದಿ:09-08-2023 ರಂದು ನಡೆದ ಅನುಕಂಪದ ಆಧಾರದ ನೇಮಕಾತಿ ಸಮಿತಿಯ ನಡವಳಿಗಳು.
6) ಉಪ ಆಯುಕ್ತರು (ಆಡಳಿತ) ರವರ ಅಧ್ಯಕ್ಷತೆಯಲ್ಲಿ ದಿ:16-10-2023 ರಂದು ನಡೆದ ಅನುಕಂಪದ ಆಧಾರದ ನೇಮಕಾತಿ ಸಮಿತಿಯ ನಡವಳಿಗಳು.
7) ಸಹಾಯಕ ನಿರ್ದೇಶಕರು (ಪರೀಕ್ಷೆ), ರವರ ಪತ್ರ ಸಂಖ್ಯೆ:ಕಶಾಪಮೌಮ/ಪಿಯು/ಅಂ.ಶಾ/ ನೈ.ಪ್ರ.ಪ/23-24 ದಿನಾಂಕ: 16-12-2023.



---------

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅನುಕಂಪದ ಆಧಾರದ ನೇಮಕಾತಿ ಕೋರಿ ಸಲ್ಲಿಸಲಾದ ಮನವಿ ಮತ್ತು ದಾಖಲಾತಿಗಳನ್ನು ಪರಿಶೀಲಿಸಿ, ಶ್ರೀ ಕೃಷ್ಣ, ಪೌರಕಾರ್ಮಿಕರು, ಸಹಾಯಕ ಕಾರ್ಯನಿರ್ವಹಾಕ ಅಭಿಯಂತರರು (ಘ.ತ್ಯಾ.ನಿ-ಗಾಂಧಿನಗರ) ರವರ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದವರು ಸೇವೆಯಲ್ಲಿರುವಾಗಲೇ ಮೃತರಾಗಿದ್ದು, ಸದರಿಯವರ ಮಗನಾದ ಶ್ರೀ ಹರೀಶ್ ಕುಮಾರ್.ಕೆ ರವರು ದ್ವಿತೀಯ ಪಿ.ಯು.ಸಿ ವಿದ್ಯಾರ್ಹತೆ ಹೊಂದಿರುವುದರಿಂದ ಗ್ರೂಫ್ 'ಸಿ' ಹುದ್ದೆಯಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲು ಸಮಿತಿಯು ಶಿಫಾರಸ್ಸು ಮಾಡಲಾಗಿರುತ್ತದೆ.

ಉಪ ಆಯುಕ್ತರು (ಆಡಳಿತ) ರವರ ಅಧ್ಯಕ್ಷತೆಯಲ್ಲಿ ದಿನಾಂಕ:16-10-2023 ರಂದು ನಡೆದ ಅನುಕಂಪದ ಆಧಾರದ ಮೇಲೆ ನೇಮಕಾತಿ ಅಂತಿಮ ಪರಿಶೀಲನಾ ಸಮಿತಿ ಶ್ರೀ ಹರೀಶ್ ಕುಮಾರ್.ಕೆ ರವರನ್ನು ಗ್ರೂಫ್ 'ಸಿ' ಹುದ್ದೆಯಾದ ದ್ವಿತೀಯ ದರ್ಜೆ ಸಹಾಯಕರ ಹುದ್ದೆಯಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲು ಸಮಿತಿಯು ತೀರ್ಮಾನಿಸಲಾಗಿರುತ್ತದೆ. ಸದರಿ ಸಮಿತಿಯ ತೀರ್ಮಾನದ ನಡವಳಿಯನ್ನು ನೇಮಕಾತಿ ಪ್ರಾಧಿಕಾರಿಯಾದ ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರು ಅನುಮೋದಿಸಿರುತ್ತಾರೆ.

ಶ್ರೀ ಹರೀಶ್ ಕುಮಾರ್.ಕೆ ಬಿನ್ ದಿವಂಗತ ಶ್ರೀ ಕೃಷ್ಣ ರವರ ವಿವರಗಳು ಈ ಕೆಳಕಂಡಂತೆ ಇರುತ್ತವೆ.

| | | |
|---|---|---|
| 1. | ಹೆಸರು | ಶ್ರೀ ಹರೀಶ್ ಕುಮಾರ್.ಕೆ |
| 2. | ಜನ್ಮ ದಿನಾಂಕ | 09-10-1991 (ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿರುವಂತೆ, ರಿ.ನಂ.2010080071 3) |
| 3. | ವಿಳಾಸ | No. 15 F Street, Shanti Nagar, Wilson Garden, Bangalore 560027 |
| 4. | ಪ್ರವರ್ಗ | ಪರಿಶಿಷ್ಟ ಜಾತಿಗಳು (ಆದಿ ಕರ್ನಾಟಕ) (ದಿ:25-09-2019 ರಂದು ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ಜಿಲ್ಲೆ ರವರು ವಿತರಿಸಿರುವ ಜಾತಿ ಪ್ರಮಾಣ ಪತ್ರ) |

ಉಲ್ಲೇಖ-(1)ರ ಸರ್ಕಾರಿ ಆದೇಶದ ಅನ್ವಯ ಹಾಗೂ ಉಲ್ಲೇಖ-(2) ರಿಂದ (4)ರ ವರೆಗಿನ ದಾಖಲಾತಿಗಳು ಮತ್ತು ವರದಿಗಳನ್ನಾಧರಿಸಿ ಉಲ್ಲೇಖ-(5) ಮತ್ತು (6)ರ ಸಭೆ ನಡವಳಿಗಳ ತೀರ್ಮಾನದಂತೆ, ದಿವಂಗತ ಶ್ರೀ ಕೃಷ್ಣ, ಪೌರಕಾರ್ಮಿಕರು ರವರ ಮಗನಾದ ಶ್ರೀ ಹರೀಶ್ ಕುಮಾರ್.ಕೆ ರವರನ್ನು ಅನುಕಂಪದ ಆಧಾರದ ಮೇಲೆ ಶ್ರೇಣಿ ರೂ.21400-42000ರಲ್ಲಿ ರಲ್ಲಿ ಗ್ರೂಪ್ "ಸಿ" ದರ್ಜೆಯಲ್ಲಿ ದ್ವಿತೀಯ ದರ್ಜೆ ಸಹಾಯಕರು ಹುದ್ದೆಗೆ ಈ ಕೆಳಕಂಡ ಷರತ್ತಿಗಳಿಗೊಳಪಡಿಸಿ ನೇಮಕಾತಿ ಮಾಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೆಲಸ ಕಾರ್ಯಗಳ ಹಿತದೃಷ್ಟಿಯಿಂದ ಖಾಲಿ ಇರುವ ಸಹಾಯಕ ಕಂದಾಯ ಅಧಿಕಾರಿ (ವಸಂತನಗರ) ಇಲ್ಲಿ ಕಾರ್ಯನಿರ್ವಹಿಸಲು ಆದೇಶಿಸಲಾಗಿದೆ.

ಪು.ತಿ.ನೋ..

**ಷರತ್ತುಗಳು**

1) ~~ಶ್ರೀ ಹರೀಶ್ ಕುಮಾರ್.ಕೆ ಬಿನ್ ದಿವಂಗತ ಶ್ರೀ ಕೃಷ್ಣ, ಇವರು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ~~ ಪತ್ರ ತಲುಪಿದ 7 ದಿವಸಗಳೊಳಗಾಗಿ, ದೇಹದಾರ್ಢ್ಯತೆ ಪತ್ರ, ಎಸ್.ಎಸ್.ಎಲ್.ಸಿ ಅಂಕಪಟ್ಟಿ ಪ್ರಮಾಣ ಪ ಮತ್ತು ಇತರೇ ಮೂಲ ದಾಖಲಾತಿಗಳೊಂದಿಗೆ ಸಹಾಯಕ ಕಂದಾಯ ಅಧಿಕಾರಿ (ವಸಂತನಗರ) ರವರ ಬ ಕರ್ತವ್ಯಕ್ಕೆ ಹಾಜರಾಗತಕ್ಕದ್ದು. ಕರ್ತವ್ಯಕ್ಕೆ ಹಾಜರಾದ ಕೂಡಲೇ ಚರಾಸ್ತಿಗಳ ಮತ್ತು ಸ್ಥಿರಾಸ್ತಿಗ ವಿವರಣೆಯನ್ನು ತೋರಿಸುವ ಪಟ್ಟಿಯನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಸಲ್ಲಿಸತಕ್ಕದ್ದು.

2) ಈ ನೇಮಕಾತಿಯು 1977ರ ಕರ್ನಾಟಕ ನಾಗರಿಕ ಸೇವೆಗಳು (ಪ್ರೊಬೇಷನರಿ) ನಿಯಮಾವಳಿಯಂತೆ 2 ವರ್ಷಗ ಪರೀಕ್ಷಾರ್ಥ ಅವಧಿಗೆ ಒಳಪಟ್ಟಿರುತ್ತದೆ. ಈ ಅವಧಿಯಲ್ಲಿ ತೃಪ್ತಿಕರ ಸೇವೆ ಸಲ್ಲಿಸಿ, ಇಲಾಖಾ ಪರೀಕ್ಷೆಗಳಾ ಅಕೌಂಟ್ಸ್ ಹೈಯರ್ / ಲೋಯರ್, ರೆವಿನ್ಯೂ ಲೋಯರ್, ಮುನಿಸಿಪಲ್ ಅಂಡ್ ಲೋಕಲ್ ಬೋರ್ಡ್ಸ ಪರೀಕ್ಷೆಗಳಲ್ಲಿ ಮತ್ತು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಪಾಸು ಮಾಡುವುದು ಕಡ್ಡಾಯಗೊಳಿಸಲಾಗಿ ಹಾಗೂ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣ / ವಿನಾಯಿತಿ ಪಡೆದು, ಪರೀಕ್ಷಾರ್ಥ ಸೇವಾ ಅವಧಿಯನು ಘೋಷಿಸಿಕೊಳ್ಳುವುದು.

3) ಸರ್ಕಾರದ ಅಥವಾ ಸರ್ಕಾರದಿಂದ ಅಂಗೀಕೃತ ಹೊಂದಿದ ಸಂಸ್ಥೆಯಿಂದ ಒಂದು ವರ್ಷದ ಅವಧಿಯೊಳ ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 43 ಎಸ್ ಸಿಆರ್ 2008, ದಿನಾಂಕ: 18-12-2012ರ ಆದೇಶದಂ ಕಂಪ್ಯೂಟರ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ, ಪ್ರಮಾಣ ಪತ್ರವನ್ನು ಸಲ್ಲಿಸುವುದು.

4) ಸದರಿಯವರು ಷರತ್ತು 2 ಮತ್ತು 3ನ್ನು ಪರೀಕ್ಷಾರ್ಥ ಅವಧಿ ಪೂರೈಸದಿದ್ದಲ್ಲಿ 1977ರ ಕರ್ನಾಟಕ ನಾಗರಿ ಸೇವೆಗಳು (ಪ್ರೊಬೇಷನರಿ) ನಿಯಮಾವಳಿಗಳ ನಿಯಮ 5(1)(ಬಿ) ರನ್ವಯ ಪಾಲಿಕೆಯ ಸೇವೆಯಿಂದ ಬಿಡುಗ ಮಾಡಲಾಗುವುದೆಂದು ತಿಳಿಯುವುದು.

5) ಈ ನೇಮಕಾತಿಯನ್ನು ಪಡೆಯಲು ಅಭ್ಯರ್ಥಿಯು ಯಾವುದಾದರೂ ನಕಲು ಇಲ್ಲವೇ ಫೋರ್ಜ ದಾಖಲಾತಿಗಳನ್ನು ಅಥವಾ ಸುಳ್ಳು ಮಾಹಿತಿಯನ್ನು ಸಲ್ಲಿಸಿರುವುದು ದೃಢಪಟ್ಟಲ್ಲಿ 2020ರ ಬೃಹ ಬೆಂಗಳೂರು ಮಹಾನಗರ ಪಾಲಿಕೆಯ (ಅಧಿಕಾರಿ ಮತ್ತು ನೌಕರರುಗಳ ಸಾಮಾನ್ಯ ವೃಂದ ಮತ್ತು ನೇಮಕಾ ನಿಯಮಗಳು, 1977ರ ಸಾಮಾನ್ಯ ನೇಮಕಾತಿ ನಿಯಮಾವಳಿ ನಿಯಮ (20)ರ ರೀತ್ಯಾ ನೇಮಕಾತಿ ಹೊಂದು ಸಲುವಾಗಿ ಸುಳ್ಳು ದಾಖಲಾತಿಗಳನ್ನು ಸೃಷ್ಟಿಸಿ ನಗರ ಪಾಲಿಕೆಗೆ ವಂಚಿಸಿರುತ್ತಾರೆಂದು ಭಾವಿಸಿ, 1957 ಕರ್ನಾಟಕ ನಾಗರಿಕ ಸೇವೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಾವಳಿಯ ನಿಯವ 11ರ ರೀತಿ ನೇಮಕಾತಿ ಆದೇಶವನ್ನು ರದ್ದುಪಡಿಸಲಾಗುವುದು ಹಾಗೂ ಕ್ರಿಮಿನಲ್ ಮೊಕದ್ದಮೆಯನು ಹೂಡಲಾಗುವುದೆಂದು ತಿಳಿಯುವುದು.

6). ಪಿಂಚಣಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ (ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ 31-03-2006 ರಂತೆ, ಎನ್.ಪಿ.ಎಸ್ ಗೆ ಅರ್ಹರಿರುತ್ತೀರಿ.

7) ಸದರಿಯವರು ಅಗತ್ಯ ದಾಖಲೆಗಳನ್ನು ಕೂಡಲೇ ಒದಗಿಸಿ ನೂತನ ಪಿಂಚಣಿ ಯೋಜನೆಯಲ್ಲಿ ನೊಂದಾಯಿಸಲು ಸೂಚಿಸಿದೆ ಹಾಗೂ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು PRAN ಸಂಖ್ಯೆ ಸೃಜಿಸಲ ಹಾಗೂ ಕಟಾವಣೆಗೆ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ.

ಮಾನ್ಯ ಮುಖ್ಯ ಆಯುಕ್ತರವರ ಆದೇಶದಂತೆ)

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

16/1/2024 14/1/24

ಪ್ರತಿಯನ್ನು: ಮಾನ್ಯ ಆಡಳಿತಗಾರರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು(ಆಡಳಿತ/ಹಣಕಾಸು/ ಪಶ್ಚಿಮ/ ಪೂರ್ವ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಜಂಟಿ ಆಯುಕ್ತರು (ಪಶ್ಚಿಮ/ ಪೂರ್ವ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದ.
: ಸಹಾಯಕ ಕಂದಾಯ ಅಧಿಕಾರಿ (ವಸಂತನಗರ) ರವರ ಕಛೇರಿಗೆ ಅಭ್ಯರ್ಥಿಯ ಭಾವಚಿತ್ರದೊಂದಿಗೆ ಮುಂದಿನ ಕ್ರಮಕ್ಕೆ ಕಳುಹಿಸಿದ
: ಸಹಾಯಕ ಆಯುಕ್ತರು, ನೇಮಕಾತಿ ವಿಭಾಗ ರವರಿಗೆ ಕಳುಹಿಸಿದೆ.
: ಸಹಾಯಕ ಕಾರ್ಯನಿರ್ವಹಾಕ ಅಭಿಯಂತರರು (ಫ.ತ್ಯಾ.ನಿ-ಗಾಂಧಿನಗರ) ವಲಯ ರವರಿಗೆ ಮೃತ ನೌಕರರ ಸೇವಾಪುಸ್ತಕದೊಂದಿಗೆ ಕಳುಹಿಸಿದ.
: ಮು.ಲೆ.ಅ/ಮು.ಲೆ.ಪ/ಉ.ನಿ. (ಹಣಕಾಸು- ಪಶ್ಚಿಮ/ ಪೂರ್ವ) ರವರಿಗೆ ಕಳುಹಿಸಿದೆ.
: ನಿರ್ದೇಶಕರು (ಮಾಹಿತಿ ಮತ್ತು ತಂತ್ರಜ್ಞಾನ) ಹಾಗೂ ಉಪ ಮುಖ್ಯ ಮಾಹಿತಿ ಅಧಿಕಾರಿ ರವರಿಗೆ ಕಳುಹಿಸುತ್ತಾ, ಪಾಲಿಕೆಯ ವೆಬ್‌ಸೈಟ್ನಲ್ಲಿ ಅಳವಡಿಸಲು ಸೂಚಿಸಿದೆ.
: ಅಭ್ಯರ್ಥಿಗೆ / ಕಛೇರಿ ಕಡತಕ್ಕೆ.

ಉಪ ಮುಖ್ಯ ಮಾಹಿತಿ ಅಧಿಕಾರಿ (ಮಾಹಿತಿ ತಂತ್ರಜ್ಞಾನ) ರವರ ಕಛೇರಿ
ಸಂಖ್ಯೆ: 1331
ದಿನಾಂಕ: 06/02/2024
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಎನ್.ಆರ್.ಚೌಕ, ಬೆಂಗಳೂರು